ವಿಷಯ:- ಮಾಗಡಿ ತಾಲ್ಲೂಕಿನಲ್ಲಿ ಖಾಸಗೀ ಬಸ್‌ಗಳ ಅಸಮರ್ಪಕ ಸೇವೆಯಿಂದ ಸಾರ್ವಜನಿಕರಿಗೆ ತೊಂದರೆ.

1113 (1319) **ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ):-** ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಾಗಡಿ ತಾಲ್ಲೂಕಿನಲ್ಲಿ ಖಾಸಗೀ ಬಸ್‌ಗಳ ಅಸಮರ್ಪಕ ಸೇವೆಯಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಈ ಸಮಸ್ಯೆಯನ್ನು ನಿವಾರಿಸಲು ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳನ್ನು ಓಡಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀ ಪಿ.ಜಿ.ಆರ್. ಸಿಂಧ್ಯ (ಸಾರಿಗೆ ಸಚಿವರು):-

ಅ) ಹೌದು.

ಆ) ಪರಿಶೀಲಿಸಿ ಸಮಸ್ಯೆಯನ್ನು ನಿವಾರಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ವಿಷಯ:- ಮಾಗಡಿ ತಾಲ್ಲೂಕಿನಲ್ಲಿ ಆಶ್ರಯ ಸಕ್ರಮ ಸಮಿತಿ ಕುರಿತು.

1116 (1902) **ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ):-** ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಾಗಡಿ ತಾಲ್ಲೂಕಿನಲ್ಲಿ ಆಶ್ರಯ ಸಕ್ರಮ ಸಮಿತಿಗೆ ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು?

ಆ) ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಸಲ್ಲಿಸಲು ಅವಕಾಶ ನೀಡಲಾಗುವುದೇ?

ಶ್ರೀ ಹೆಚ್.ಡಿ. ರೇವಣ್ಣ (ವಸತಿ ಸಚಿವರು):-

ಅ) ರಾಜ್ಯದಲ್ಲಿ ಆಶ್ರಯ ಸಕ್ರಮ : ಆಕ್ರಮ ಸಮಿತಿಗಳಾವುವು ಅಸ್ತಿತ್ವದಲ್ಲಿರಲಿಲ್ಲ. ಆದರೆ ಮಾಗಡಿ ತಾಲ್ಲೂಕಿನಲ್ಲಿ ಸರ್ಕಾರದ ಆದೇಶ ಸಂಖ್ಯೆ : ವನಇ 20 ಪಿಹೆಚ್‌ಎಸ್ 95, ದಿನಾಂಕ : 17.4.95 ರಂತೆ ವಸತಿ ರಹಿತರು ಮತ್ತು ನಿವೇಶನ ರಹಿತರ ಸರ್ವೇಕ್ಷಣೆಗೆ 20.5.95ರ ಕೊನೆಯ ದಿನಾಂಕದವರೆಗೆ ಈ ಕೆಳಕಂಡಂತೆ ಅರ್ಜಿಗಳನ್ನು ಸಲ್ಲಿಸಿರುತ್ತಾರೆ.

ಗ್ರಾಮಾಂತರ		ನಗರ	
ನಿವೇಶನ ರಹಿತರು	ವಸತಿ ರಹಿತರು	ನಿವೇಶನ ರಹಿತರು	ವಸತಿ ರಹಿತರು
5762	6412	755	-

ಆ) ನಿರ್ದಿಷ್ಟ ಪ್ರಕರಣಗಳಲ್ಲಿ ಅರ್ಹ ಫಲಾನುಭವಿಗಳ ಹೆಸರು ಪಟ್ಟಿಯಲ್ಲಿ ಕೈಬಿಟ್ಟು ಹೋಗಿದ್ದರೆ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಉಪ ವಿಭಾಗಾಧಿಕಾರಿಗಳು ಸ್ಥಳ ತನಿಖೆ ಮಾಡಿ ಗ್ರಾಮ ಪಂಚಾಯಿತಿಯೊಂದಿಗೆ ಸಮಾಲೋಚಿಸಿ ಅರ್ಹ ಫಲಾನುಭವಿಗಳ ಪಟ್ಟಿಯಲ್ಲಿ ಸೇರಿಸಬಹುದು.